148th, ಕ್ರ.ಸಂ 33

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಡಿ.ಎಸ್.ಅರುಣ್ ರವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಲು ಅನುಮತಿ ಕೋರಿ ಸಲ್ಲಿಸಿರುವ ಮನವಿಗೆ ಸರ್ಕಾರದ ಉತ್ತರ

******

ಪ್ರಶ್ನೆ: ರಾಜ್ಯದಲ್ಲಿ ಲವ್ ಜಿಹಾದ್ ಪ್ರಕರಣಗಳು ಕಳೆದ ಹಲವು ವರ್ಷಗಳಿಂದ ಎಗ್ಗಿಲ್ಲದೆ ತಾಂಡವವಾಡುತ್ತಿರುವುದು, ಲಂಗು ಲಗಾಮಿಲ್ಲದೆ ಜರುಗುತ್ತಿರುವ ಬಗ್ಗೆ ದಿನಾಂಕ: 22.12.2022ರ ಪತ್ರಿಕೆಯಲ್ಲಿ ವರದಿಯಾಗಿರುತ್ತದೆ.

ಇಂತಹ ಪ್ರಕರಣಗಳು ಕರ್ನಾಟಕ ರಾಜ್ಯವನ್ನು ಹೊರತುಪಡಿಸಿ ಬೇರೆ ಬೇರೆ ರಾಜ್ಯಗಳಲ್ಲಿ ಜರುಗುತ್ತಿದ್ದುದು ಸಾಮಾನ್ಯವಾಗಿತ್ತು. ಆದರೆ, ಇತ್ತೀಚಿನ ದಿನಗಳಲ್ಲಿ ಲವ್ ಜಿಹಾದ್ ಎಂಬ ಹೆಸರಿನಲ್ಲಿ ಹೆಣ್ಣುಮಕ್ಕಳ ಮೇಲಿನ ಮಾನಸಿಕ ಮತ್ತು ದೈಹಿಕ ಕ್ರೌರ್ಯ ಹೆಚ್ಚಾಗುತ್ತಿರುವುದು ಕಳವಳಕ್ಕೆ ಕಾರಣವಾಗಿರುತ್ತದೆ.

ಕರ್ನಾಟಕದ ಮಂಗಳೂರು ಸೇರಿದಂತೆ, ಬೆಂಗಳೂರು, ಉಡುಪಿ ಮತ್ತು ಶಿವಮೊಗ್ಗಗಳಲ್ಲಿ ಇಂತಹ ಪ್ರಕರಣಗಳು ಜರುಗಿವೆ. ಹೆಣ್ಣುಮಕ್ಕಳನ್ನು ಪ್ರೀತಿಯ ಬಲೆಯಲ್ಲಿ ಬೀಳಿಸಿ ಮದುವೆಯ ನೆಪವೊಡ್ಡಿ ಇಸ್ಲಾಂ ಧರ್ಮಕ್ಕೆ ಮತಾಂತರಗೊಳಿಸಲಾಗುತ್ತಿರುವುದು ದಿನೇ ದಿನೇ ವರದಿಯಾಗುತ್ತಿದೆ.

ರಾಜ್ಯದಲ್ಲಿಯೂ ಉತ್ತರ ಪ್ರದೇಶದ ಮಾದರಿಯಲ್ಲಿ ಮತಾಂತರ ನಿಷೇಧ ಕಾಯಿದೆಯನ್ನು ಕಠಿಣವಾಗಿ ಜಾರಿ ಮಾಡಬೇಕೇನ್ನುವ ಕೂಗು ಸಾರ್ವತ್ರಿಕವಾಗಿ ಕೇಳಿಬರುತ್ತಿದೆ. ಈ ಲವ್ ಜಿಹಾದ್‌ನಲ್ಲಿ ಹಿಂದೂ ಹುಡುಗಿಯರೇ ಗುರಿಯಾಗಿರುವುದೂ ಸಹ ಬಹುತೇಕ ಪ್ರಕರಣಗಳಲ್ಲಿ ಕಂಡುಬಂದಿರುತ್ತದೆ. ಈ ಬೆನ್ನಲ್ಲೆ ಹಲವು ಹಿಂದೂ ಜಾಗೃತಿ ಸಂಘಟನೆಗಳು ರಾಜ್ಯದಲ್ಲೂ ಲವ್‌ಜಿಹಾದ್ ವಿರೋಧಿ ವಿಶೇಷ ದಳ ರಚಿಸಲು ಆಗ್ರಹಿಸಿರುತ್ತಾರೆ.

ರಾಜ್ಯ ಸರ್ಕಾರ ಲವ್ ಜಿಹಾದ್ ತಡೆಗೆ ಪ್ರತ್ಯೇಕ ಕಾಯಿದೆ ರೂಪಿಸುವ ಬದಲು ಈಗಾಗಲೇ ಎರಡೂ ಸದನದಲ್ಲಿ ಅಂಗೀಕಾರವಾಗಿರುವ ಮತಾಂತರ ನಿಷೇಧ ಕಾಯಿದೆಯಲ್ಲೇ ಇದನ್ನು ಸೇರಿಸಲು ಮುಂದಾಗಿರುವುದು ತಿಳಿದುಬಂದಿರುತ್ತದೆ. ಇದು ನಿಜವೇ ಆಗಿದ್ದಲ್ಲಿ ಆದಷ್ಟು ಶೀಘ್ರ ಕಠಿಣ ನಿಯಮಗಳನ್ನು ಒಳಗೊಂಡ ಕಾನೂನನ್ನು ಸಿದ್ದಪಡಿಸಿ ಜಾರಿಗೆ ತರಲು ಸರ್ಕಾರ ಕ್ರಮ ವಹಿಸಬೇಕೆಂಬುದರ ಕುರಿತು.

ಉತ್ತರ: ರಾಜ್ಯದಲ್ಲಿ ಮತಾಂತರ ನಿಷೇಧ ಕಾಯ್ದೆ ಜಾರಿ ಕುರಿತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯದ ಅಧಿಸೂಚನೆ ಸಂಖ್ಯೆ: ಸಂ.ವ್ಯ.ಶಾ.ಇ 55 ಶಾಸನ 2021, ಬೆಂಗಳೂರು ದಿನಾಂಕ: 17.05.2022ರ ಅಧಿಸೂಚನೆ ರೀತ್ಯಾ ರಾಜ್ಯದಲ್ಲಿ ಕರ್ನಾಟಕ ಧಾರ್ಮಿಕ ಸ್ವಾತಂತ್ರ್ಯ ಹಕ್ಕು ಸಂರಕ್ಷಣಾ ಆಧ್ಯಾದೇಶ-2022ರ ಕಾಯ್ದೆಯು ದಿನಾಂಕ: 17.05.2022 ರಿಂದ ಜಾರಿಗೆ ಬಂದಿರುತ್ತದೆ.

ಸರ್ಕಾರದ ಪತ್ರ ಸಂಖ್ಯೆ ಹೆಚ್‌ಡಿ 460 ಎಸ್‌ಎಸ್‌ಟಿ 2021 (ಭಾಗ-2) ದಿನಾಂಕ: 25.05.2022ರ ಪತ್ರದಲ್ಲಿ ಕರ್ನಾಟಕ ಧಾರ್ಮಿಕ ಸ್ವಾತಂತ್ರ್ಯ ಹಕ್ಕು ಸಂರಕ್ಷಣಾ ಆಧ್ಯಾದೇಶ-2022ರ ಉದ್ದೇಶ ಮತ್ತು ನಿಯಮಗಳ ಬಗ್ಗೆ ಹೆಚ್ಚಿನ ಅರಿವು ಮೂಡಿಸಿ, ರಾಜ್ಯದಲ್ಲಿ ಈ ಅಧ್ಯಾದೇಶವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಘಟಕಾಧಿಕಾರಿಗಳಿಗೆ ಸೂಚಿಸಿದೆ.

ರಾಜ್ಯದಲ್ಲಿ ಮತಾಂತರ ನಿಷೇಧ ಕಾಯ್ದೆ ಜಾರಿಗೆ ಬಂದ ನಂತರ ಇಲ್ಲಿಯವರೆಗೆ ಈ ಕೆಳಗಿನಂತೆ ಪ್ರಕರಣಗಳು ದಾಖಲಾಗಿರುತ್ತವೆ.

| ಕ್ರಸ | ಘಟಕ | ಮತಾಂತರ ನಿಷೇಧ ಕಾಯ್ದೆಯಡಿ ದಾಖಲಾದ ಪ್ರಕರಣಗಳ ಸಂಖ್ಯೆ |
|---|---|---|
| 1 | ಬೆಂಗಳೂರು ನಗರ | 2 |
| 2 | ಮಂಗಳೂರು ನಗರ | 2 |
| 3 | ಕೊಡಗು ಜಿಲ್ಲೆ | 2 |
| 4 | ಮಂಡ್ಯ | 2 |
| 5 | ಚಿತ್ರದುರ್ಗ | 1 |
| | ಒಟ್ಟು | 9 |

ಲವ್ ಜಿಹಾದ್ ಹಾಗೂ ಯಾವ ಪ್ರಕರಣದ ಮೂಲಕ ಧಾರ್ಮಿಕ ಮತಾಂತರಗೊಳಿಸುತ್ತಿರುವುದನ್ನು ನಿಯಂತ್ರಿಸಲು ಈ ಕುರಿತು ಕಳಗಿನಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ.

- ಠಾಣಾ ವ್ಯಾಪ್ತಿಯಲ್ಲಿ ಶಾಂತಿ ಸಭೆ, ಯುವಜನ ಸಭೆ, ಮೊಹಲ್ಲ ಮಿಟಿಂಗ್, ನಾಗರೀಕ ಸಮಿತಿ ಸಭೆಗಳನ್ನು ನಡೆಸಿ ಸಾರ್ವಜನಿಕರಿಗೆ ಮತ್ತು ಯುವಕರಿಗೆ ತಿಳುವಳಿಕೆಗಳನ್ನು ನೀಡಲಾಗುತ್ತಿದೆ ಹಾಗೂ ವೃತ್ತ ಉಪ ವಿಭಾಗ, ಜಿಲ್ಲಾ ಮಟ್ಟದಲ್ಲಿಯೂ ಸಹ ಸಭೆಗಳನ್ನು ಕೈಗೊಳ್ಳಲಾಗುತ್ತಿದೆ.
- ಪ್ರತಿ ಠಾಣಾ ವ್ಯಾಪ್ತಿಯಲ್ಲಿ ಗಸ್ತು 112 ಹೊಯ್ಸಳ ವಾಹನದಲ್ಲಿ ದಿನದ 24 ಗಂಟೆಯೂ ಅಧಿಕಾರಿ, ಸಿಬ್ಬಂದಿಯವರು ರೌಂಡ್ಸ್ ಗಸ್ತು ಕರ್ತವ್ಯದಲ್ಲಿ ನಿರತರಾಗಿದ್ದಾರೆ.
- ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವ ವ್ಯಕ್ತಿಗಳು/ ಸಂಘಟನೆಗಳು/ಸಾಮಾಜಿಕ ಜಾಲತಾಣಗಳ ಬಗ್ಗೆ ಸತತ ನಿಗಾ ಇಡಲಾಗಿದೆ.
- ಠಾಣಾ ವ್ಯಾಪ್ತಿಯಲ್ಲಿ ರಾತ್ರಿ ಬೀಟ್ ಮತ್ತು ಶುಭೋದಯ (ಗುಡ್ ಮಾರ್ನಿಂಗ್) ಬೀಟುಗಳನ್ನು ಕೈಗೊಳ್ಳಲಾಗಿದೆ. ಏಕ ಕಾಲದಲ್ಲಿ ಜಿಲ್ಲಾ ವ್ಯಾಪ್ತಿಯಲ್ಲಿ ಕ್ಷಿಪ್ರ ವಾಹನ ತಪಾಸಣೆಗಳನ್ನು ಕೈಗೊಳ್ಳಲಾಗಿದೆ.
- ಮತೀಯ ಗೂಂಡಾಗಳು ಕಂಡುಬಂದಲ್ಲಿ ಆರೋಪಿಗಳನ್ನು ಗುರುತಿಸಿ ರೌಡಿ ಪಟ್ಟಿಯನ್ನು ದಾಖಲಿಸಿ, ಸದರಿಯವರನ್ನು ಗಡಿಪಾರು ಮಾಡಲಾಗಿರುತ್ತದೆ.
- ಹಬ್ಬ-ಹರಿ ದಿನಗಳಲ್ಲಿ ಎಲ್ಲಾ ಕೋಮಿನ ಮುಖಂಡರನ್ನು ಸೇರಿಸಿ ಶಾಂತಿ ಸಭೆ, ಮೋಹಲ್ಲಾ ಮೀಟಿಂಗ್, ಯುವಕರ ಸಭೆ ಹಾಗೂ ಸಾರ್ವಜನಿಕರಿಗೆ ಕಾನೂನಿನ ಅರಿವು ಮೂಡಿಸುವುದು.
- ಎಲ್ಲಾ ಸಮಾಜದ ಮುಖಂಡರಿಗೆ/ ಯುವಕರಿಗೆ ಹಬ್ಬ ಹರಿದಿನಗಳಲ್ಲಿ ಕರೆಯಿಸಿ ಶಾಂತಿ ಸಭೆಗಳನ್ನು ಕೈಕೊಂಡು ಸೂಕ್ತ ತಿಳುವಳಿಕೆ ನೀಡುತ್ತಾ ಬರಲಾಗುತ್ತಿದೆ.
- ಮೇಲ್ಕಂಡ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಯಾವುದೇ ಧಾರ್ಮಿಕ ಮತಾಂತರದ ಬಗ್ಗೆ ಮಾಹಿತಿ ಕಂಡು ಬಂದಲ್ಲಿ ತಕ್ಷಣ ಪ್ರಕರಣ ದಾಖಲಿಸಿ ಹಿರಿಯ ಪೊಲೀಸ್ ಅಧಿಕಾರಿರವರು ಸ್ಥಳಕ್ಕೆ ಭೇಟಿ ನೀಡಿ ಅಪರಾಧಿಯನ್ನು ದಸ್ತಗಿರಿ ಮಾಡಿ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು.
- ಇಂತಹ ಪ್ರಕರಣಗಳು ಕಂಡುಬಂದಲ್ಲಿ ಪ್ರಕರಣವನ್ನು ದಾಖಲಿಸಲಾಗುತ್ತಿದೆ.

ಸಂಖ್ಯೆ: ಒಇ 719 ಎಸ್ ಎಸ್ ಟಿ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು